# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತಮೂರನೆಯ ಅಧಿವೇಶನ**

**ಕಾರ್ಯಕಲಾಪಗಳ ಪಟ್ಟಿ**

**ಗುರುವಾರ, ದಿನಾಂಕ:25ನೇ ಜುಲೈ, 2024**

**(ಸಮಯ: ಬೆಳಗ್ಗೆ 10.30 ಗಂಟೆಗೆ)**

* * *

## 01. ಸಭೆಯ ಮುಂದಿಡಲಾಗುವ ಕಾಗದ ಪತ್ರ

ಅ. **ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು)** ಅವರು:–
ಮಾರ್ಚ್ 2022ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಇಲಾಖೆಗಳು ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಮೇಲಿನ ಅನುಸರಣಾ ಲೆಕ್ಕಪರಿಶೋಧನಾ ವರದಿ(2024ರ ವರದಿ ಸಂಖ್ಯೆ–3)ಯನ್ನು ಸಭೆಯ ಮುಂದಿಡುವುದು.

ಆ. **ಕಾರ್ಯದರ್ಶಿಯವರು:**
**ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದಿಡುವುದು**

1. ಕರ್ನಾಟಕ ಧನವಿನಿಯೋಗ (ಸಂಖ್ಯೆ–4) ವಿಧೇಯಕ, 2024
2. ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ)(ಎರಡನೇ ತಿದ್ದುಪಡಿ) ವಿಧೇಯಕ, 2024
3. ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ (ಕ್ಷೇಮಾಭಿವೃದ್ಧಿ) ವಿಧೇಯಕ, 2024

ಇ. ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಮೂರು ಮತ್ತು ನಾಲ್ಕನೇ ಪಟ್ಟಿಗಳ ರೀತ್ಯಾ

## 02. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01. ಕರ್ನಾಟಕ ಧನವಿನಿಯೋಗ (ಸಂಖ್ಯೆ–4) ವಿಧೇಯಕ, 2024
**ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಧನವಿನಿಯೋಗ (ಸಂಖ್ಯೆ–4) ವಿಧೇಯಕ, 2024"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ)(ಎರಡನೇ ತಿದ್ದುಪಡಿ) ವಿಧೇಯಕ, 2024

**ಶ್ರೀ ಎಚ್.ಕೆ. ಪಾಟೀಲ (ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ)(ಎರಡನೇ ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

03. ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ (ಕ್ಷೇಮಾಭಿವೃದ್ಧಿ) ವಿಧೇಯಕ, 2024

**ಶ್ರೀ ಸಂತೋಷ್ ಎಸ್. ಲಾಡ್ (ಮಾನ್ಯ ಕಾರ್ಮಿಕ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ (ಕ್ಷೇಮಾಭಿವೃದ್ಧಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 03. ಚುನಾವಣಾ ಪ್ರಸ್ತಾವ

**ಶ್ರೀ ಎನ್.ಎಸ್. ಬೋಸ್‌ರಾಜು (ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು) ಅವರು:-**

ಅ. "ವಿಧಾನ ಮಂಡಲದ/ವಿಧಾನ ಪರಿಷತ್ತಿನ ವಿವಿಧ ಸಮಿತಿಗಳಿಗೆ, ಚುನಾವಣೆ ನಡೆಸುವ ಬದಲು ಮಾನ್ಯ ಸದಸ್ಯರುಗಳನ್ನು ನಾಮ ನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು".

ಆ. "ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಸೆನೆಟ್‌ಗೆ ಹಾಗೂ ಕರ್ನಾಟಕ ರಾಜ್ಯ ಅಂಗವಿಕಲರ ಸಲಹಾ ಮಂಡಳಿಗೆ ಚುನಾವಣೆ ನಡೆಸುವ ಬದಲು ಮಾನ್ಯ ಸದಸ್ಯರುಗಳನ್ನು ನಾಮ ನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು".

ಇ. ವಿಧಾನ ಪರಿಷತ್ತಿನ ನಿಯಮಾವಳಿ ಸಮಿತಿಗೆ ಮಾನ್ಯ ಶಾಸಕರುಗಳನ್ನು ನಾಮನಿರ್ದೇಶನ ಮಾಡಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು.

## 04. ವರದಿಗಳನ್ನೊಪ್ಪಿಸುವುದು

**ಅ. ಶ್ರೀ ರಾಜೇಂದ್ರ ರಾಜಣ್ಣ (ಸದಸ್ಯರು, ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ)** ಅವರು 2023-24ನೇ ಸಾಲಿನ ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 3ನೇ ವರದಿಯನ್ನೊಪ್ಪಿಸುವುದು.

**ಆ. ಶ್ರೀ ಕೆ. ಅಬ್ದುಲ್ ಜಬ್ಬರ್ (ಸದಸ್ಯರು, ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ)** ಅವರು 2023-24ನೇ ಸಾಲಿನ ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ಮೊದಲನೇ ವರದಿಯನ್ನೊಪ್ಪಿಸುವುದು.

..3..

## 05. ನಿರ್ಣಯಗಳು

**ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) ಈ ಕೆಳಕಂಡ ನಿರ್ಣಯಗಳನ್ನು ಮಂಡಿಸುವುದು:-**

ಅ. **"**ಕರ್ನಾಟಕ ವಿಧಾನ ಸಭೆಯು, 2026ರಲ್ಲಿನ ಅಥವಾ ಅದರ ನಂತರ ನಡೆಸುವ ಹೊಸ ಜನಗಣತಿಯ ಆಧಾರದ ಮೇಲೆ ಕ್ಷೇತ್ರ ಪುನರ್ ವಿಂಗಡಣಾ ಪ್ರಕ್ರಿಯೆಯನ್ನು ನಡೆಸಬಾರದೆಂದು ಜನಸಂಖ್ಯೆಯನ್ನು ಆಧರಿಸಿ ಸ್ಥಾನಗಳ ಸಂಖ್ಯೆಯನ್ನು ಹೆಚ್ಚಿಸುವ ಸಂದರ್ಭದಲ್ಲಿ, ಪ್ರತಿ ರಾಜ್ಯಕ್ಕೆ ಹಂಚಿಕೆ ಮಾಡಬೇಕಾದ ಲೋಕಸಭಾ ಸ್ಥಾನಗಳ ಸಂಖ್ಯೆಯನ್ನು ಮತ್ತು ಪ್ರತಿ ರಾಜ್ಯದ ವಿಧಾನ ಸಭೆಗೆ ನಿಗದಿಪಡಿಸಬೇಕಾದ ಸ್ಥಾನಗಳ ಒಟ್ಟು ಸಂಖ್ಯೆಯನ್ನು 1971ರ ಜನಗಣತಿಯನ್ನಾಧರಿಸಿ ನಿರ್ಧರಿಸಬೇಕೆಂದು ಕೇಂದ್ರ ಸರ್ಕಾರವನ್ನು ಈ ಸದನವು ಒತ್ತಾಯಿಸುತ್ತದೆ**"**.

ಆ. **"**ಭಾರತವು ವಿಶ್ವದ ಅತಿದೊಡ್ಡ ಒಕ್ಕೂಟ ಪ್ರಜಾಪ್ರಭುತ್ವವಾಗಿದೆ. ಭಾರತ ಸಂವಿಧಾನದ ಭಾಗ XVರಲ್ಲಿ ಪ್ರತಿಪಾದಿಸಿರುವ ಮುಕ್ತ ಮತ್ತು ನ್ಯಾಯ ಸಮ್ಮತ ಚುನಾವಣೆಯ ತತ್ವವು ಈ ಪ್ರಜಾಪ್ರಭುತ್ವದ ಆತ್ಮವಾಗಿದೆ. **'**ಒಂದು ರಾಷ್ಟ್ರ, ಒಂದು ಚುನಾವಣೆ**'** ಪ್ರಸ್ತಾವವು ಭಾರತದ ಪ್ರಜಾಸತ್ತಾತ್ಮಕ ಮತ್ತು ಒಕ್ಕೂಟ ವ್ಯವಸ್ಥೆಗೆ ಅಪಾಯವನ್ನುಂಟು ಮಾಡುತ್ತದೆ. ಬೇರೆ ಬೇರೆ ರಾಜ್ಯಗಳ ವಿಧಾನ ಸಭೆಗಳು ಅವುಗಳದ್ದೇ ಆದ ಅಧಿಕಾರ ಅವಧಿಗಳನ್ನು ಹೊಂದಿರುತ್ತವೆ ಮತ್ತು ಏಕರೂಪ ಚುನಾವಣಾ ವೇಳಾಪಟ್ಟಿಯು ರಾಷ್ಟ್ರೀಯ ವಿಷಯಗಳ ಮೇಲೆ ಹೆಚ್ಚಾಗಿ ಗಮನಹರಿಸುವ ಮತ್ತು ಸ್ಥಳೀಯ ಕಾಳಜಿಗಳನ್ನು ನಿರ್ಲಕ್ಷಿಸುವ ಮೂಲಕ ರಾಜ್ಯಗಳ ಸ್ವಾಯತ್ತತೆಯನ್ನು ದುರ್ಬಲಗೊಳಿಸಬಹುದು. ಸಾಕಷ್ಟು ಭದ್ರತೆಯನ್ನು ಖಚಿತಪಡಿಸಿಕೊಳ್ಳುವುದು, ಚುನಾವಣಾ ಸಿಬ್ಬಂದಿಯನ್ನು ನಿರ್ವಹಿಸುವುದು, ಮತದಾರರ ಬೇಸರ, ಕಡಿಮೆಗೊಂಡ ಸರ್ಕಾರದ ಉತ್ತರದಾಯಿತ್ವ ಹಾಗೂ ಆರ್ಥಿಕ ಮತ್ತು ಸಾಮಾಜಿಕ ಅಡತಡೆಗಳು ಏಕಕಾಲಿಕ ಚುನಾವಣೆಗಳಿಗೆ ಸಂಬಂಧಿಸಿದ ಗುರುತರ ಗಂಡಾಂತರಗಳಾಗಿವೆ. ಹಾಗಾಗಿ ಭಾರತದ ಪ್ರಜಾಸತ್ತಾತ್ಮಕ ಪ್ರಕ್ರಿಯೆಗಳು ಮತ್ತು ಒಕ್ಕೂಟ ಸಮಗ್ರತೆಯನ್ನು ರಕ್ಷಿಸಲು ಈ ಕಠೋರ ನೀತಿಯನ್ನು ಅನುಷ್ಠಾನಗೊಳಿಸಬಾರದೆಂದು ಕೇಂದ್ರ ಸರ್ಕಾರವನ್ನು ಈ ಸದನವು ಒತ್ತಾಯಿಸುತ್ತದೆ**"**.

## 06. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ

ಆ) <u>**ತಡೆಹಿಡಿಯಲಾದ ಪ್ರಶ್ನೆಗಳು:**</u>

| | |
|---|---|
| 3ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ವೈ.ಎಂ. ಸತೀಶ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 36(326)<br>3ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 39(351)<br>3ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಮಧು ಜಿ. ಮಾದೇಗೌಡ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 43(344) | ಮಾನ್ಯ ಉಪ ಮುಖ್ಯಮಂತ್ರಿಗಳು |
| 3ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀಮತಿ ಭಾರತಿ ಶೆಟ್ಟಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 42(338) | ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ

..4..

## 07. ಶೂನ್ಯವೇಳೆ ಪ್ರಸ್ತಾವಗಳು

## 08. ಗಮನ ಸೆಳೆಯುವ ಸೂಚನೆಗಳು

01. **ಶ್ರೀಯುತರುಗಳಾದ ಯು.ಬಿ. ವೆಂಕಟೇಶ್, ಐವನ್ ಡಿ'ಸೋಜಾ ಹಾಗೂ ಯತೀಂದ್ರ ಎಸ್,** ಅವರುಗಳು ರಾಜ್ಯ ಸರ್ಕಾರದ ಅಧಿಕಾರಿಗೆ ಕೇಂದ್ರ ಸರ್ಕಾರದ ಅಧಿಕಾರಿಗಳು ನಮ್ಮ ರಾಜ್ಯ ಸರ್ಕಾರ ಹಾಗೂ ಮುಖ್ಯಮಂತ್ರಿಗಳು ಮತ್ತು ಸಚಿವರುಗಳ ವಿರುದ್ಧ ಹೇಳಿಕೆಯನ್ನು ದಾಖಲಿಸುವಂತೆ ಒತ್ತಾಯವನ್ನು ಹೇರಿ, ಜೀವ ಬೆದರಿಕೆಯನ್ನು ಹಾಕಿರುವ ಸಂಬಂಧದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಹೆಚ್ಚುವರಿ ನಿರ್ದೇಶಕರು ದಿನಾಂಕ: 22.07.2024ರಂದು ವಿಲ್ಸನ್ ಗಾರ್ಡನ್ ಪೊಲೀಸ್ ಠಾಣೆಯಲ್ಲಿ ದೂರನ್ನು ದಾಖಲಿಸಿದ್ದು, ಕೇಂದ್ರ ಸರ್ಕಾರದ ಉನ್ನತ ಅಧಿಕಾರಿಗಳು ರಾಜ್ಯ ಸರ್ಕಾರಿ ಅಧಿಕಾರಿಗಳ ಕೆಲಸಕ್ಕೆ ಅಡ್ಡಿಯುಂಟು ಮಾಡುತ್ತಿರುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

02. **ಶ್ರೀ ಡಿ.ಎಸ್. ಅರುಣ್** ಅವರು 2022-23ನೇ ಸಾಲಿನ ಆರ್ಥಿಕ ವರ್ಷದಲ್ಲಿ ಎಲ್ಲಾ ಲೆಕ್ಕಶೀರ್ಷಿಕೆಗಳಿಗೆ ಹಂಚಿಕೆಯಾದ ಹಣದಲ್ಲಿ ಬಳಕೆಯಾಗದೆ ಉಳಿದ ಅನುದಾನವನ್ನು ಸಂಚಿತ ನಿಧಿಗೆ ವರ್ಗಾವಣೆಗೊಳಿಸದೆ ಅಮಾನತ್ತು ಖಾತೆಯಲ್ಲೆ ಉಳಿಸಿರುವ ವಿಚಾರದ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

03. **ಶ್ರೀ ಮಧು ಜಿ. ಮಾದೇಗೌಡ** ಅವರು ಅರಣ್ಯ ಇಲಾಖೆಯಲ್ಲಿ 1994ರ ಪೂರ್ವದಲ್ಲಿ ನೇರ ನೇಮಕಾತಿ ಹುದ್ದೆಗಳ ಎದುರಾಗಿ ದ್ವಿತೀಯ ದರ್ಜೆ ಸಹಾಯಕರಿಂದ ಪ್ರಥಮ ದರ್ಜೆ ಸಹಾಯಕ ವೃಂದಕ್ಕೆ "Promotion on purely temporary basis" ಎಂದು ಮುಂಬಡ್ತಿ ನೀಡಿದ್ದು, ಜೇಷ್ಠತೆಯಲ್ಲಿ ಪರಿಗಣಿಸುವ ಕುರಿತು ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

04. **ಶ್ರೀಯುತರುಗಳಾದ ಸಿ.ಟಿ. ರವಿ, ಎನ್. ರವಿಕುಮಾರ್, ಶಶೀಲ್ ಜಿ ನಮೋಶಿ, ಹೇಮಲತಾ ನಾಯಕ್, ಡಿ.ಎಸ್. ಅರುಣ್, ವೈ.ಎಂ.ಸತೀಶ್ ಹಾಗೂ ಕೆ.ಎಸ್.ನವೀನ್** ಅವರುಗಳು ಮೈಸೂರು ರಾಜ್ಯ ವಕ್ಫ್ ಮಂಡಳಿಯು ಮೈಸೂರು ಗೆಜೆಟ್‌ನಲ್ಲಿ ದಿನಾಂಕ:22.10.1964ರಂದು ನಿಗಧಿಪಡಿಸಿರುವ ಮಾನದಂಡಗಳನ್ನು ಅನುಸರಿಸದೆ ಕಾನೂನುಬಾಹಿರವಾಗಿ ಸೇರ್ಪಡೆ ಮಾಡಿರುವ ಆಸ್ತಿಗಳನ್ನು ಗೆಜೆಟ್ ನೋಟಿಫಿಕೇಷನ್‌ನಿಂದ ಕೈಬಿಡಲು ಕ್ರಮಕೈಗೊಳ್ಳುವ ವಿಷಯದ ಕುರಿತು ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಗಮನ ಸೆಳೆಯುವುದು.

05. **ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ** ಅವರು ಚಿಕ್ಕೋಡಿ ಜಿಲ್ಲೆಯ ಸರ್ಕಾರಿ ಪ್ರೌಢ ಶಾಲೆಗಳಿಗೆ ಡೆಸ್ಕ್‌ಗಳನ್ನು ಪೂರೈಕೆ ಮಾಡದೆ ಪ್ರೌಢ ಶಾಲಾ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಅಡಚಣೆ ಉಂಟಾಗುತ್ತಿರುವ ಕುರಿತು ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರ ಗಮನ ಸೆಳೆಯುವುದು.

06. **ಶ್ರೀ ಟಿ.ಎನ್. ಜವರಾಯಿಗೌಡ** ಅವರು ನೆಲಮಂಗಲದ ಸುತ್ತಮುತ್ತಲಿನ ಗ್ರಾಮಗಳ ಮಾರ್ಗದಲ್ಲಿ 30 ವರ್ಷಗಳಿಂದ ನಿಷ್ಕ್ರಿಯವಾಗಿದ್ದ 110 ಕೆ.ವಿ ಹಾಗೂ 220 ಕೆ.ವಿ ಲೈನ್‌ಗಳನ್ನು ಕ್ರಮವಾಗಿ 220 ಕೆ.ವಿ ಹಾಗೂ 400 ಕೆ.ವಿ. ಮಾರ್ಗಗಳನ್ನಾಗಿ ಸಾರ್ವಜನಿಕ ಹಿತದೃಷ್ಟಿಯಿಂದ ಭೂಗರ್ಭದ ಮುಖಾಂತರ ಅಳವಡಿಸುವ ಕುರಿತು ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

07. **ಶ್ರೀಯುತರುಗಳಾದ ಶಶೀಲ್ ಜಿ. ನಮೋಶಿ, ಎಸ್.ವ್ಹಿ. ಸಂಕನೂರ, ಎಸ್.ಎಲ್. ಭೋಜೇಗೌಡ ಹಾಗೂ ನಿರಾಣಿ ಹಣಮಂತ್ ರುದ್ರಪ್ಪ** ಅವರುಗಳು ಶಿಕ್ಷಕರ ವರ್ಗಾವಣೆಯನ್ನು ಕೌನ್ಸಿಲಿಂಗ್ ಮುಖಾಂತರ ಕೈಗೊಳ್ಳಬೇಕೆಂಬ ನಿಯಮವಿದ್ದರೂ ನಿಯಮಗಳನ್ನು ಉಲ್ಲಂಘಿಸಿ ಪ್ರೌಢ ಶಾಲಾ ಮುಖ್ಯಶಿಕ್ಷಕರ ವರ್ಗಾವಣೆ ಹಾಗೂ ಪ್ರಾಥಮಿಕ ಶಾಲಾ ಶಿಕ್ಷಕರ ನಿಯೋಜನೆ ಮಾಡಿರುವ ಕುರಿತು ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರ ಗಮನ ಸೆಳೆಯುವುದು.

08. **ಶ್ರೀ ಗೋವಿಂದರಾಜು** ಅವರು ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕು, ಹಾನಬಾಳ ಹೋಬಳಿಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸಿ ಪ್ರತಿನಿತ್ಯ 3 ಅವಧಿಯಲ್ಲಿಯೂ ಕರ್ತವ್ಯ ನಿರ್ವಹಿಸಲು ವೈದ್ಯಾಧಿಕಾರಿಗಳನ್ನು ನೇಮಿಸುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

09. **ಶ್ರೀಮತಿ ಉಮಾಶ್ರೀ** ಅವರು ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘಕ್ಕೆ ಕಟ್ಟಡದ ವ್ಯವಸ್ಥೆ ಕಲ್ಪಿಸುವ ಹಾಗೂ ಮಾನ್ಯತೆ ನೀಡಲು ಇರುವ ನಿಯಮವನ್ನು ಸಡಿಲಿಸುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

10. **ಡಾ: ಧನಂಜಯ ಸರ್ಜಿ** ಅವರು ತುಂಗಾ ನದಿ ತೀರ ಪ್ರದೇಶಗಳಲ್ಲಿ ಮಣ್ಣಿನ ಪರೀಕ್ಷೆ ಮಾಡಿಸದೆ ಅವ್ಯಾಹತವಾಗಿ ರಾಸಾಯನಿಕ ಗೊಬ್ಬರ ಬಳಕೆ ಮಾಡುತ್ತಿರುವುದರಿಂದ ನೀರಿನಲ್ಲಿ ಅಲ್ಯೂಮಿನಿಯಂ ಅಂಶವು ನಿಗದಿತ ಪ್ರಮಾಣಕ್ಕಿಂತ ಹೆಚ್ಚಾಗಿ ನೀರು ಮಲಿನಗೊಂಡಿರುವುದರಿಂದ ಆರೋಗ್ಯ ಸಮಸ್ಯೆಗಳು ತಲೆದೋರುವ ಆತಂಕದ ಕುರಿತು ಹಾಗೂ ಪ್ರತಿ ತಾಲ್ಲೂಕು ಪಂಚಾಯತಿಗಳಲ್ಲಿ ಮಣ್ಣು ಪರೀಕ್ಷೆ ಲ್ಯಾಬ್ ಸ್ಥಾಪಿಸುವುದರ ಕುರಿತು ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

11. **ಶ್ರೀ ಶಶೀಲ್ ಜಿ. ನಮೋಶಿ** ಅವರು ರಾಯಚೂರು ಜಿಲ್ಲೆ ಸಿರವಾರ ತಾಲ್ಲೂಕು ಅತ್ತನೂರು ಗ್ರಾಮಕ್ಕೆ "ಬಹುಗ್ರಾಮ ಕುಡಿಯುವ ನೀರು ಯೋಜನೆ" ಕಾಮಗಾರಿ ಜಾರಿಗೊಳಿಸಿ ಕುಡಿಯುವ ನೀರಿನ ಸೌಲಭ್ಯ ಒದಗಿಸುವ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

## 09. ನಿಯಮ 330ರ ಮೇರೆಗೆ

01. **ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ ಹಾಗೂ ಶ್ರೀಯುತರುಗಳಾದ ಸಿ.ಟಿ. ರವಿ, ಎನ್. ರವಿಕುಮಾರ್, ಕೆ.ಎ. ತಿಪ್ಪೇಸ್ವಾಮಿ, ಶಶೀಲ್ ಜಿ. ನಮೋಶಿ ಹಾಗೂ ಇತರರು** ರಾಜ್ಯದಲ್ಲಿ ಇತ್ತೀಚೆಗೆ ಹೆಚ್ಚುತ್ತಿರುವ ಅಪರಾಧ ಪ್ರಕರಣಗಳನ್ನು ತಡೆಯುವಲ್ಲಿ ಸರ್ಕಾರ ಸಂಪೂರ್ಣ ವಿಫಲವಾಗಿರುವ ಕುರಿತು ಪ್ರಸ್ತಾಪಿಸುವುದು.

02. **ಶ್ರೀ ಯು.ಬಿ. ವೆಂಕಟೇಶ್** ಅವರು ಯುನೋಕಾಯಿನ್ ಟೆಕ್ನಲಾಜೀಸ್ ಕಂಪನಿ ಸರ್ವರ್ ಹ್ಯಾಕ್ ಮಾಡಿ ಕೋಟ್ಯಾಂತರ ರೂಪಾಯಿ ಮೌಲ್ಯದ ಬಿಟ್ ಕಾಯಿನ್ ಕಳ್ಳತನ ಮಾಡಿದ ಸಂಘಟಿತ ಕೃತ್ಯದಲ್ಲಿನ ಆಪಾದಿತರು ಮತ್ತು ಹಗರಣದ ಬಗ್ಗೆ ಪ್ರಗತಿಯಲ್ಲಿರುವ ಸಿ.ಐ.ಡಿ. ವಿಚಾರಣೆ ಮತ್ತು ವರದಿ ಕುರಿತು ಪ್ರಸ್ತಾಪಿಸುವುದು.

03. **ಶ್ರೀ ಪಿ.ಹೆಚ್. ಪೂಜಾರ್ ಹಾಗೂ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರುಗಳು ಕೃಷ್ಣ ಮೇಲ್ದಂಡೆ ಯೋಜನೆಯ 3ನೇ ಹಂತದ ಕಾಮಗಾರಿಯನ್ನು ಪೂರ್ಣಗೊಳಿಸುವ ಕುರಿತು ಪ್ರಸ್ತಾಪಿಸುವುದು.

..6..

೦೪. **ಶ್ರೀಮತಿ ಬಲ್ಕೀಸ್ ಬಾನು** ಅವರು ವೃತ್ತಿ ಶಿಕ್ಷಣದ ಕೋರ್ಸುಗಳಲ್ಲಿ ಸಂಭಾವನೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಬೋಧಕ/ಬೋಧಕೇತರ ಸಿಬ್ಬಂದಿಗಳನ್ನು ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಎದುರು ವಿಶೇಷ ನೇಮಕಾತಿ ನಿಯಮಗಳನ್ವಯ ದಿನಾಂಕ:06.04.2021ರಂದು ವಿಲೀನಗೊಳಿಸಿ ಖಾಯಂಗೊಳಿಸಿದಂತೆ ಇನ್ನುಳಿದ 253 ನೌಕರರುಗಳನ್ನು ಸಹ ಖಾಯಂಗೊಳಿಸುವ ಕುರಿತು ಪ್ರಸ್ತಾಪಿಸುವುದು.

೦೫. **ಶ್ರೀಯುತರುಗಳಾದ ಐವನ್ ಡಿ'ಸೋಜಾ, ಪ್ರಕಾಶ್ ಕೆ. ರಾಥೋಡ್, ಯು.ಬಿ. ವೆಂಕಟೇಶ್, ಉಮಾಶ್ರೀ, ಮಂಜುನಾಥ್ ಭಂಡಾರಿ ಹಾಗೂ ಇತರರು** 2021-22ನೇ ಸಾಲಿನಲ್ಲಿ ಭೋವಿ ಅಭಿವೃದ್ಧಿ ನಿಗಮದಲ್ಲಿ ಕೋಟ್ಯಾಂತರ ರೂಪಾಯಿ ಅವ್ಯವಹಾರ ನಡೆದಿರುವ ಕುರಿತು ಪ್ರಸ್ತಾಪಿಸುವುದು.

೦೬. **ಶ್ರೀಮತಿ ಹೇಮಲತಾ ನಾಯಕ್** ಅವರು ಕೊಪ್ಪಳ ಜಿಲ್ಲಾ ಆಸ್ಪತ್ರೆಯಲ್ಲಿ ಐ.ಸಿ.ಯು ಬೆಡ್ ಸಿಗದೆ ರೋಗಿಗಳು ತೊಂದರೆ ಅನುಭವಿಸಿ ಸಾವನ್ನಪ್ಪುತ್ತಿರುವ ಕುರಿತು ಪ್ರಸ್ತಾಪಿಸುವುದು.

## 10. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅ. ರಾಜ್ಯದ ವಿದ್ಯಾರ್ಥಿಗಳಿಗೆ ನೀಟ್ ಪರೀಕ್ಷೆಯಿಂದ ಉಂಟಾದ ಅನ್ಯಾಯದ ಬಗ್ಗೆ ದಿನಾಂಕ:15.07.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:04(54)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಐವನ್ ಡಿ'ಸೋಜಾ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಆ. ಕೊಡಗು ಜಿಲ್ಲೆಯ ಪ್ರವಾಸೋದ್ಯಮವನ್ನು ಉತ್ತೇಜಿಸುವ ಕುರಿತು ದಿನಾಂಕ:18.07.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:32(331)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ)** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಇ. ಕೆ.ಪಿ.ಎಸ್.ಸಿ. ಯಲ್ಲಿ ನೇಮಕಾತಿ ಪ್ರಕ್ರಿಯೆಗಳ ಕುರಿತು ದಿನಾಂಕ:18.07.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:35(295)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಸಿ.ಟಿ. ರವಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಈ. ರಾಜ್ಯ ಸರ್ಕಾರಿ ನೌಕರರಿಗೆ 7ನೇ ವೇತನ ಆಯೋಗ ಜಾರಿ ಮಾಡುವ ಕುರಿತು ದಿನಾಂಕ:18.07.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:44(356+357+294+409+277)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀಯುತರುಗಳಾದ ಎಸ್.ವ್ಹಿ. ಸಂಕನೂರ, ಶಶೀಲ್ ಜಿ. ನಮೋಶಿ, ನಿರಾಣಿ ಹಣಮಂತ್ ರುದ್ರಪ್ಪ, ಸುನೀಲ್ ವಲ್ಯಾಪುರ್ ಮತ್ತು ಪ್ರತಾಪ್ ಸಿಂಹ ನಾಯಕ್ ಕೆ.** ಅವರುಗಳಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಉ. ಜಮೀನುಗಳ ಮಾರ್ಗಸೂಚಿ ದರಗಳ ಪರಿಷ್ಕರಣೆ ಕುರಿತು ದಿನಾಂಕ:24.07.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:103(996)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಪಿ.ಹೆಚ್. ಪೂಜಾರ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**